# All India Radio: Bangalore
# National Bulletin In Kannada
# 27.05.2025 1.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಗುಜರಾತ್‌ನಲ್ಲಿಂದು ೫ ಸಾವಿರದ ೫೦೦ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿದ ಪ್ರಧಾನಿ ನರೇಂದ್ರ ಮೋದಿ
2. ೧೧ ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ೨೫ ದಿನಗಳ ಕ್ಷಣಗಣನೆ; ಪುದುಚೇರಿಯಲ್ಲಿ ಯೋಗ ಮಹೋತ್ಸವಕ್ಕೆ ಚಾಲನೆ
3. ಸುಧಾರಿತ ಮಧ್ಯಮ ಯುದ್ಧವಿಮಾನ - ಎಎಂಸಿಎ ಕಾರ್ಯಕ್ರಮ ಅನುಷ್ಠಾನ ಮಾದರಿಗೆ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅನುಮೋದನೆ
4. ಪಾಕಿಸ್ತಾನ ಬೆಂಬಲಿಸುತ್ತಿರುವ ಭಯೋತ್ಪಾದನಾ ಚಟುವಟಿಕೆಯನ್ನು ಜಾಗತಿಕ ಮಟ್ಟದಲ್ಲಿ ಮನವರಿಕೆ ಮಾಡುತ್ತಿರುವ ಭಾರತದ ಸರ್ವಪಕ್ಷ ನಿಯೋಗ
5. ಐಪಿಎಲ್ ಟಿ-೨೦ ಕ್ರಿಕೆಟ್: ನಿರ್ಣಾಯಕ ಪಂದ್ಯದಲ್ಲಿಂದು ರಾಯಲ್ ಚ್ಯಾಲೆಂಜರ್ಸ್ ಬೆಂಗಳೂರು - ಲಖ್ನೌ ಸೂಪರ್ ಜೈಂಟ್ಸ್ ಮುಖಾಮುಖಿ

<><><><>

ಗುಜರಾತ್ ಪ್ರವಾಸದ ಭಾಗವಾಗಿ ೨೦ ವರ್ಷಗಳ ಗುಜರಾತ್ ನಗರಾಭಿವೃದ್ಧಿಯ ಪಯಣದ ಸಂಭ್ರಮಾಚರಣೆಯ ಕಾರ್ಯಕ್ರಮದಲ್ಲಿಂದು ಪ್ರಧಾನಿ ನರೇಂದ್ರ ಮೋದಿ, ಪಾಲ್ಗೊಂಡು ೫ ಸಾವಿರದ ೫೦೦ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಿದರು. ಈ ಯೋಜನೆಗಳು ನಗರಾಭಿವೃದ್ಧಿ, ಮೂಲಸೌಕರ್ಯ, ಜಲಸಂಪನ್ಮೂಲ ನಿರ್ವಹಣೆ, ಆರೋಗ್ಯ, ರಕ್ಷಣೆ ಮತ್ತು ಕಂದಾಯ ಸೇವೆಗಳು ಸೇರಿದಂತೆ ಪ್ರಮುಖ ಕ್ಷೇತ್ರಗಳನ್ನು ಒಳಗೊಂಡಿವೆ. ಜಾಮ್‌ನಗರ, ಸೂರತ್, ಅಹಮದಾಬಾದ್, ಗಾಂಧಿನಗರ ಮತ್ತು ಜುನಾಗಢ್ ನಗರಗಳಲ್ಲಿ ಹಲವು ನಗರಾಭಿವೃದ್ಧಿ ಯೋಜನೆಗಳಿಗೆ ಇಂದು ಚಾಲನೆ ದೊರೆಯಿತು. ಇವುಗಳಲ್ಲಿ ಅಹಮದಾಬಾದ್‌ನಲ್ಲಿ ೧ ಸಾವಿರ ಕೋಟಿ ರೂಪಾಯಿ ಮೌಲ್ಯದ ಸಾಬರಮತಿ ನದಿ ದಂಡೆ ಯೋಜನೆಯ ೩ನೇ ಹಂತದ ಶಿಲಾನ್ಯಾಸ ಪ್ರಮುಖವಾಗಿದೆ. ಪ್ರಧಾನ ಮಂತ್ರಿ ಆವಾಸ್ ಯೋಜನೆಯಡಿ ೧ ಸಾವಿರದ ೬ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ೨೨ ಸಾವಿರಕ್ಕೂ ಅಧಿಕ ಮನೆಗಳನ್ನು ಪ್ರಧಾನಿ ಉದ್ಘಾಟಿಸಿದರು. ಇದರ ಜೊತೆಗೆ ಗಾಂಧೀನಗರದಲ್ಲಿಂದು ಪ್ರಧಾನಿ 'ಆಪರೇಷನ್ ಸಿಂಧೂರ ಸಮ್ಮಾನ್ ಯಾತ್ರೆ'ಗೆ ಚಾಲನೆ ನೀಡಿದರು. ರಾಜಭವನದಿಂದ ಆರಂಭಗೊಂಡ ಈ ಭವ್ಯ ಯಾತ್ರೆಗೆ ಅಪಾರ ಸಂಖ್ಯೆಯಲ್ಲಿ ಜನರು ಸಾಕ್ಷಿಯಾದರು. ಈ ಸಂದರ್ಭದಲ್ಲಿ ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಹಾಗೂ ಕೇಂದ್ರ ಜಲಶಕ್ತಿ ಸಚಿವ ಸಿ.ಆರ್. ಪಾಟೀಲ್ ಉಪಸ್ಥಿತರಿದ್ದರು. ಈ ಶೋಭಾಯಾತ್ರೆ ಮಹಾತ್ಮ ಮಂದಿರದಲ್ಲಿ ಸಮಾರೋಪಗೊಂಡಿತು. ಇದಕ್ಕೂ ಮುನ್ನ ಪ್ರಧಾನಿ ಗಾಂಧಿನಗರದಲ್ಲಿ ರೋಡ್ ಶೋ ನಡೆಸಿದರು.

<><><><>

೧೧ ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ೨೫ ದಿನಗಳ ಕ್ಷಣಗಣನೆಯನ್ನು ಗುರುತಿಸುವ ಸಲುವಾಗಿ, 'ಯೋಗ ಮಹೋತ್ಸವ ೨೦೨೫' ಅನ್ನು ಇಂದು ಪುದುಚೇರಿಯಲ್ಲಿ ಆಯೋಜಿಸಲಾಗಿತ್ತು. ಕೇಂದ್ರ ಆಯುಷ್ ರಾಜ್ಯ ಸಚಿವ ಪ್ರತಾಪರಾವ್ ಜಾಧವ್ ಅವರು ಈ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಉದ್ಘಾಟನಾ ಭಾಷಣ ಮಾಡಿದ ಸಚಿವ ಪ್ರತಾಪರಾವ್ ಜಾಧವ್, ಯೋಗ ವರ್ತಮಾನದ ಪ್ರಮುಖ ಅಗತ್ಯವಾಗಿದೆ ಮತ್ತು ಆರೋಗ್ಯಕರ ಭವಿಷ್ಯದ

ಅವಿಭಾಜ್ಯ ಅಂಗವಾಗಿದೆ. ಯೋಗ ವಯಸ್ಸು, ಲಿಂಗದ ಗಡಿಗಳನ್ನು ಮೀರಿದೆ ಮತ್ತು ಶಾಂತಿ ಮತ್ತು ಸಾಮರಸ್ಯದ ಸಾರ್ವತ್ರಿಕ ಭಾಷೆಯಾಗಿದೆ ಎಂದು ಹೇಳಿದರು. ಪುದುಚೇರಿ ಲೆಫ್ಟಿನೆಂಟ್ ಗವರ್ನರ್ ಕೆ. ಕೈಲಾಶ್‌ನಾಥನ್, ಮುಖ್ಯಮಂತ್ರಿ ಎನ್. ರಂಗಸಾಮಿ, ಸಂಸದರಾದ ಎಸ್. ಸೆಲ್ವಗಣಪತಿ ಮತ್ತು ವಿ. ವೈಥಿಲಿಂಗಂ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಆಯುಷ್ ಸಚಿವಾಲಯದ ಅಡಿಯಲ್ಲಿ ಮೊರಾರ್ಜಿ ದೇಸಾಯಿ ರಾಷ್ಟ್ರೀಯ ಯೋಗ ಸಂಸ್ಥೆ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ಸಾಮೂಹಿಕ ಯೋಗ ಪ್ರದರ್ಶನವನ್ನು ನಡೆಸಲಾಯಿತು.

<><><><>

ಸುಧಾರಿತ ಮಧ್ಯಮ ಯುದ್ಧವಿಮಾನ - ಎಎಂಸಿಎ ಕಾರ್ಯಕ್ರಮ ಅನುಷ್ಠಾನ ಮಾದರಿಗೆ ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅನುಮೋದನೆ ನೀಡಿದ್ದಾರೆ. ಈ ಮಾದರಿಯು ಭಾರತದ ಸ್ಥಳೀಯ ರಕ್ಷಣಾ ಸಾಮರ್ಥ್ಯಗಳನ್ನು ಹೆಚ್ಚಿಸುವ ಮತ್ತು ಬಲವಾದ ದೇಶೀಯ ಏರೋಸ್ಪೇಸ್ ಕೈಗಾರಿಕಾ ಪರಿಸರ ವ್ಯವಸ್ಥೆಯನ್ನು ಬೆಳೆಸುವ ಗುರಿಯನ್ನು ಹೊಂದಿದೆ. ಅನುಷ್ಠಾನ ಮಾದರಿ ವಿಧಾನ ಸ್ಪರ್ಧಾತ್ಮಕ ಆಧಾರದ ಮೇಲೆ ಖಾಸಗಿ ಮತ್ತು ಸಾರ್ವಜನಿಕ ವಲಯಗಳಿಗೆ ಸಮಾನ ಅವಕಾಶಗಳನ್ನು ಒದಗಿಸುತ್ತದೆ ಎಂದು ರಕ್ಷಣಾ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಘಟಕ ಅಥವಾ ಹೂಡಿಕೆದಾರ ದೇಶದ ಕಾನೂನುಗಳು ಮತ್ತು ನಿಯಮಗಳಿಗೆ ಅನುಸಾರವಾಗಿ ಭಾರತೀಯ ಕಂಪನಿಯಾಗಿರಬೇಕು ಎಂದು ಅದು ಹೇಳಿದೆ. ಸುಧಾರಿತ ಮಧ್ಯಮ ಯುದ್ಧವಿಮಾನ ಮೂಲಮಾದರಿಯನ್ನು ಅಭಿವೃದ್ಧಿಪಡಿಸಲು ಸ್ಥಳೀಯ ಪರಿಣತಿ ಮತ್ತು ಸಾಮರ್ಥ್ಯವನ್ನು ಬಳಸಿಕೊಳ್ಳುವ ನಿಟ್ಟಿನಲ್ಲಿ ಇದು ಒಂದು ಪ್ರಮುಖ ಹೆಜ್ಜೆಯಾಗಿದೆ. ಇದು ಏರೋಸ್ಪೇಸ್ ವಲಯದಲ್ಲಿ ಸ್ವಾವಲಂಬನೆಯತ್ತ ಪ್ರಮುಖ ಮೈಲಿಗಲ್ಲಾಗಿದೆ.

<><><><>

ಜಾಗತಿಕ ಮಟ್ಟದಲ್ಲಿ ಭಯೋತ್ಪಾದನೆಗೆ ಪಾಕಿಸ್ತಾನ ನೀಡುತ್ತಿರುವ ಬೆಂಬಲದ ಕುರಿತು ಮನವರಿಕೆ ಮಾಡಿಸುವ ನಿಟ್ಟಿನಲ್ಲಿ ವಿವಿಧ ರಾಷ್ಟ್ರಗಳಿಗೆ ತೆರಳಿರುವ ಭಾರತದ ಸರ್ವಪಕ್ಷ ಸದಸ್ಯರ ನಿಯೋಗಗಳು ನಿನ್ನೆ ದಕ್ಷಿಣ ಕೋರಿಯಾ, ಕೂವೈಟ್, ಕತಾರ್, ಕಾಂಗೋ ಮತ್ತು ಸ್ಲೋವೆನಿಯಾದಲ್ಲಿ ಭಯೋತ್ಪಾದನೆಯ ಪ್ರತೀ ಭಾರತದ ಶೂನ್ಯ ಸಹಿಷ್ಣುತೆ ನೀತಿಯನ್ನು ಪ್ರತಿಪಾದಿಸಿವೆ. ಇದರ ಭಾಗವಾಗಿ ಫ್ರಾನ್ಸಿಗೆ ತೆರಳಿರುವ ಸಂಸದ ರವಿಶಂಕರ್ ಪ್ರಸಾದ್ ಅವರ ನೇತೃತ್ವದ ನಿಯೋಗ ಪ್ಯಾರಿಸ್‌ನಲ್ಲಿ ಭಾರತೀಯ ಸಮುದಾಯದೊಂದಿಗೆ ಸಂವಾದ ನಡೆಸಿತು. ಸಂಸದ ಶಶಿತರೂರ್ ನೇತೃತ್ವದ ನಿಯೋಗ ನಿನ್ನೆ ದಕ್ಷಿಣ ಅಮೇರಿಕಾ ರಾಷ್ಟ್ರವಾದ ಗಯಾನಗೆ ಭೇಟಿ ನೀಡಿತು. ಈ ಕುರಿತು ಸುದ್ದಿಗಾರರಿಗೆ ಮಾಹಿತಿ ನೀಡಿದ ಶಶಿತರೂರ್ ಭಯೋತ್ಪಾದ ದಾಳಿಗಳ ವಿರುದ್ಧ ಭಾರತದ ಸ್ವರಕ್ಷಣೆಯ ಹಕ್ಕಿಗೆ ಗಯಾನ ಬೆಂಬಲ ವ್ಯಕ್ತ ಪಡಿಸಿದೆ. ಗಯಾನ ಪ್ರಸ್ತುತ ವಿಶ್ವಸಂಸ್ಥೆ ಭದ್ರತಾ ಮಂಡಳಿಯ ಸದಸ್ಯ ರಾಷ್ಟ್ರವಾಗಿರುವ ಹಿನ್ನೆಲೆ ಭಾರತದ ಪಾಲಿಗೆ ಮಹತ್ವ ಪಡೆಯುತ್ತದೆ ಎಂದಿದ್ದಾರೆ. ನಿಯೋಗ ಗಯಾನ ಅಧ್ಯಕ್ಷ ಮಹಮ್ಮದ್ ಇರ್‌ಫಾನ್ ಆಲಿ, ಗಯಾನ ಸಂಸತ್ತಿನ ಸ್ಪೀಕರ್ ಮಂಜೂರ್ ನಾಧೀರ್ ಅವರನ್ನು ಭೇಟಿ ಮಾಡಿತು. ಸಂಸದ ಸಂಜಯ್ ಝಾ ನೇತೃತ್ವದ ನಿಯೋಗ ಸಿಂಗಾಪುರದ ವಿದೇಶಾಂಗ ಗೃಹ ವ್ಯವಹಾರಗಳ ಖಾತೆ ರಾಜ್ಯ ಸಚಿವರನ್ನು ಭೇಟಿ ಮಾಡಿ, ಪೆಹಲ್ಗಾಮ್ ದಾಳಿ, ಆಪರೇಷನ್ ಸಿಂಧೂರ ಸೇರಿದಂತೆ ಇತ್ತೀಚಿನ ಬೆಳವಣಿಗೆಗಳ ಕುರಿತು ಹಾಗೂ ಭಾರತದ ದೃಢ ನಿಲುವಿನ ಬಗ್ಗೆ ಮಾಹಿತಿ ನೀಡಿತು. ಸಂಸದೆ ಸುಪ್ರೀಯಾ ಸುಳೆ ನೇತೃತ್ವದ ಸರ್ವಪಕ್ಷ ನಿಯೋಗ ಕತಾರ್ ನ ಅಧಿಕೃತಭೇಟಿಯನ್ನು ಮುಕ್ತಾಯಗೊಳಿಸಿದೆ. ಈ ಭೇಟಿ ೪ ರಾಷ್ಟ್ರಗಳ ಪ್ರವಾಸದ ಮೊದಲನೇ ಚರಣದ ಭಾಗವಾಗಿತ್ತು. ಎರಡು ದಿನಗಳ ಭೇಟಿಯಲ್ಲಿ ನಿಯೋಗ ಕತಾರ್‌ನ ಸಚಿವರು ಹಾಗೂ ಹಿರಿಯ ಅಧಿಕಾರಿಗಳೊಂದಿಗೆ ಉನ್ನತ ಮಟ್ಟದ ಮಾತುಕತೆಗಳನ್ನು ನಡೆಸಿ ಭಯೋತ್ಪಾದನೆ ಎದುರಿಸುವ ಭಾರತದ ದೃಢ ಸಂಕಲ್ಪವನ್ನು ಮನದಟ್ಟು ಮಾಡಿಸಿತು.

<><><><>

ಜಮ್ಮು ಮತ್ತು ಕಾಶ್ಮೀರದಲ್ಲಿ ಏಪ್ರಿಲ್ ೨೨ರಂದು ನಡೆದ ಭಯೋತ್ಪಾದನಾ ದಾಳಿಯ ಹಿನ್ನೆಲೆಯಲ್ಲಿ, ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ನೇತೃತ್ವದ ಸರ್ಕಾರ ಪಹಲ್ಗಾಂನಲ್ಲಿ ಇಂದು ವಿಶೇಷ ಸಚಿವ ಸಂಪುಟ ಸಭೆ ನಡೆಸಿತು. ಇದು ಉಗ್ರವಾದ ಹಾಗೂ ಹಿಂಸೆಗೆ ವಿರುದ್ಧ ಬಲವಾದ ಸಂದೇಶವನ್ನು ಕಳಿಸಲು ನಡೆದ ತೀರ್ಮಾನವಾಗಿದ್ದು, ಪಹಲ್ಗಾಂನ ನಿವಾಸಿಗಳೊಡನೆ ಏಕತೆ ತೋರಿಸಲು ಯೋಜಿಸಲಾಗಿದೆ. ಈ ವೇಳೆ ಹಿರಿಯ ಅಧಿಕಾರಿಗಳ ಜೊತೆ ಪ್ರವಾಸೋದ್ಯಮ ಪುನಶ್ಚೇತನದ ಬಗ್ಗೆ ಚರ್ಚೆ ನಡೆಯಿತು. ಕಾಶ್ಮೀರ ಪ್ರವಾಸ ಸ್ಥಳವನ್ನಾಗಿ ಉಳಿಸುವ ವಿಶ್ವಾಸ ಜನರಿಗೆ ನೀಡುವ ಉದ್ದೇಶ ಇದಾಗಿದೆ. ೨೦೨೪ರಲ್ಲಿ ಅಧಿಕಾರಕ್ಕೆ ಬಂದ ನಂತರ ಮೊದಲನೇ ಬಾರಿಗೆ ರಾಜಧಾನಿಗಳಾದ ಶ್ರೀನಗರ ಮತ್ತು ಜಮ್ಮುವಿನ ಹೊರಗೆ ನಡೆದ ಸಚಿವ ಸಂಪುಟ ಸಭೆ ಇದಾಗಿದೆ.

<><><><>

ಪಾಕಿಸ್ತಾನದ ನಗರ ಮತ್ತು ಪಟ್ಟಣಗಳಲ್ಲಿ ಭಯೋತ್ಪಾದನ ಸಂಘಟನೆಗಳು ಮುಕ್ತವಾಗಿ ಕಾರ್ಯ ಚಟುವಟಿಕೆ ನಡೆಸುತ್ತಿವೆ. ಅಲ್ಲಿ ಪಾಕಿಸ್ತಾನ ಸೇನೆ ಮತ್ತು ಸರ್ಕಾರ ಭಯೋತ್ಪಾದನೆಗೆ ಆರ್ಥಿಕ ಹಾಗೂ ಎಲ್ಲಾ ರೀತಿಯ ಬೆಂಬಲ ನೀಡಿ ಬಳಸಿಕೊಳ್ಳುತ್ತಿದೆ ಎಂದು ಕೇಂದ್ರ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ಜರ್ಮನಿಯ ಪತ್ರಿಕೆ ಒಂದಕ್ಕೆ ನೀಡಿದ ಸಂದರ್ಶನದಲ್ಲಿ ಮಾತನಾಡಿರುವ ಅವರು, ಭಯೋತ್ಪಾದಕ ದಾಳಿಗಳನ್ನು ನಡೆಸಿದ್ದಲ್ಲಿ ಭಾರೀ ಬೆಲೆ ತೆರಬೇಕಾಗುತ್ತದೆ ಎಂಬ ಸ್ಪಷ್ಟ ಸೂಚನೆಯನ್ನು ಭಾರತ ಭಯೋತ್ಪಾದಕರಿಗೆ ನೀಡಿದೆ. ಪೆಹಲ್ಗಾಮ್ ದಾಳಿಗೆ ಪ್ರತಿಕಾರವಾಗಿ ನಡೆಸಿದ ಅಪರೇಷನ್ ಸಿಂಧೂರ ವನ್ನು ಅತ್ಯಂತ ನಿಖರವಾಗಿ ನಡೆಸಲಾಯಿತು. ಇದರಿಂದಾಗಿ ಪಾಕಿಸ್ತಾನದ ವಾಯು ರಕ್ಷಣಾ ವ್ಯವಸ್ಥೆಗಳನ್ನು ಭಾರತ ನಿಷ್ಕ್ರೀಯಗೊಳಿಸಬಲ್ಲದು ಎಂಬುದನ್ನು ತೋರಿಸಿಕೊಟ್ಟಿದೆ ಎಂದಿದ್ದಾರೆ. ಉಭಯ ರಾಷ್ಟ್ರಗಳ ಮಿಲಿಟರಿ ಕಮಾಂಡರ್‌ಗಳ ನಡುವೆ ಕದನ ವಿರಾಮ ಒಪ್ಪಂದ ಮಾಡಿಕೊಳ್ಳಲಾಗಿದೆ. ಭಾರತ ಪಾಕಿಸ್ತಾನದ ಪ್ರಮುಖ ವಾಯುನೆಲೆಗಳು ಮತ್ತು ರಕ್ಷಣಾ ವ್ಯವಸ್ಥೆಯನ್ನು ಪರಿಣಾಮಕಾರಿಯಾಗಿ ಹೊಡೆದುರುಳಿಸಿ ನಿಷ್ಕ್ರೀಯಗೊಳಿಸುವಲ್ಲಿ ಸಫಲವಾಗಿದೆ ಎಂದು ತಿಳಿಸಿದ್ದಾರೆ.

<><><><>

ದೇಶದ ಪ್ರಥಮ ಪ್ರಧಾನಮಂತ್ರಿ ಪಂಡಿತ ಜವಹರಲಾಲ್ ನೆಹರು ಅವರ ಪುಣ್ಯಸ್ಮರಣೆ ದಿನವಾದ ಇಂದು ಅವರಿಗೆ ಪ್ರಧಾನಿ ನರೇಂದ್ರಮೋದಿ ಗೌರವ ನಮನ ಸಲ್ಲಿಸಿದ್ದಾರೆ.

<><><><>

ಮಹಾರಾಷ್ಟ್ರದ ಜಿಯೋರೈ-ಬೀಡ್ ಹೆದ್ದಾರಿಯಲ್ಲಿ ನಿನ್ನೆ ತಡರಾತ್ರಿ ಸಂಭವಿಸಿದ ಅಪಘಾತದಲ್ಲಿ ಆರು ಜನರು ಸಾವನ್ನಪ್ಪಿದ್ದು, ಒಬ್ಬರು ಗಂಭೀರವಾಗಿ ಗಾಯಗೊಂಡಿದ್ದಾರೆ. ಹೆದ್ದಾರಿಯಲ್ಲಿ ಒಂದು ಎಸ್ ಯು ವಿ ಕಾರ್ ಡಿವೈಡರ್‌ಗೆ ಡಿಕ್ಕಿ ಹೊಡೆದ ಪರಿಣಾಮ ಕಾರ್ ನಲ್ಲಿದ್ದ ೬ ಜನರು ವಾಹನದಿಂದ ಹೊರಬರುತ್ತಿದ್ದಾಗ, ವೇಗವಾಗಿ ಬಂದ ಟ್ರಕ್ ಅವರ ಮೇಲೆ ಹರಿದು ಆರು ಜನರು ತಕ್ಷಣವೇ ಸಾವನ್ನಪ್ಪಿದರು.

<><><><>

ಬಲಕ್ನೋದ ಏಕಾನಾ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ತಂಡ, ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವನ್ನು ಎದುರಿಸಲಿದೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ. ಅಂಕಪಟ್ಟಿಯ ಅಗ್ರ ಎರಡರ ಸ್ಥಾನವನ್ನು ಖಚಿತಪಡಿಸಿಕೊಳ್ಳಲು ಬೆಂಗಳೂರು ತಂಡಕ್ಕೆ ಈ ಪಂದ್ಯ ನಿರ್ಣಾಯಕವಾಗಿದೆ. ಪ್ರಸ್ತುತ ಆರ್.ಸಿ.ಬಿ. ಅಂಕ ಪಟ್ಟಿಯಲ್ಲಿ ಮೂರನೇ ಸ್ಥಾನದಲ್ಲಿದೆ. ಜೈಪುರದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ೨೦ ಕ್ರಿಕೆಟ್‌ನ ನಿರ್ಣಾಯಕ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡವನ್ನು ೭ ವಿಕೆಟ್‌ಗಳಿಂದ ಸೋಲಿಸುವ ಮೂಲಕ ಪಂಜಾಬ್ ಕಿಂಗ್ಸ್ ತಂಡವು ಅಗ್ರ-೨ರಲ್ಲಿ ಮತ್ತು ಕ್ವಾಲಿಫೈಯರ್ ೧ ರಲ್ಲಿ ಸ್ಥಾನವನ್ನು ಖಚಿತ ಪಡಿಸಿಕೊಂಡಿದೆ. ಈ ಗೆಲುವಿನೊಂದಿಗೆ, ಪಂಜಾಬ್ ಕಿಂಗ್ಸ್ ಅಂಕಪಟ್ಟಿಯಲ್ಲಿ ಅಗ್ರಸ್ಥಾನಕ್ಕೇರಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>